ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಟಿಪ್ಪಣಿ ಹಾಳೆ

ವಿಷಯ White Topping of road from Sheshad ಪುಟದ ಸಂಖ್ಯೆ -1-
Sheshadripuram First Garde College to Aroma Bakery Junction ಕಡತದ ಸಂಖ್ಯೆ EE/PC-1/PR/302/20-21

ಪಂಕ್ತಿಯ ಸಂಖ್ಯೆ	ಟಿಪ್ಪಣಿಗಳು ಮತ್ತು ಆಜ್ಞೆಗಳು

ಸಲ್ಲಿಸಿದೆ:

ವಿಷಯ: White Topping of road from Sheshadripuram First Garde College to Aroma Bakery Junction via 3rd Cross Road 1st A Main Road, 16th B Cross Road Annexure –F(2) ಕಾಮಗಾರಿಯ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ:ನಅಇ 215 ಎಂಎನ್‌ವೈ 2020 ದಿನಾಂಕ:09.11.2020.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ ಸರ್ಕಾರದ ಆದೇಶದಲ್ಲಿ White Topping of road from Sheshadripuram First Garde College to Aroma Bakery Junction via 3rd Cross Road 1st A Main Road, 16th B Cross Road Annexure –F(2) ಪ್ಯಾಕೇಜಿನ ರೂ. 13.93 ಕೋಟಿಗಳ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ಮತ್ತು ಟೆಂಡರ್‌ಗೆ ಅನುಮೋದನೆಯನ್ನು ನೀಡಲಾಗಿರುತ್ತದೆ.

ಅದರಂತೆ ಸದರಿ ಪ್ರಸ್ತಾವನೆಯನ್ನು ಯಲಹಂಕ ವಲಯ ಯೋಜನಾ ವಿಭಾಗದ ವತಿಯಿಂದ ಸಲ್ಲಿಸಲಾಗಿರುವುದರಿಂದ ಉಲ್ಲೇಖಿತ ಪತ್ರವನ್ನು ಮುಖ್ಯ ಅಭಿಯಂತರರು – ಯಲಹಂಕ ವಲಯ ರವರಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಕೊಡಲಾಗುತ್ತಿದೆ.

30/3/2021

30/03/2021
ಕಾರ್ಯಪಾಲಕ ಅಭಿಯಂತರರು,
ಯೋಜನೆ ಕೇಂದ್ರ-1
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಮುಖ್ಯ ಅಭಿಯಂತರರು (ಪಶ್ಚಿಮ),
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪು.ತಿ.ನೋ

ವಿಷಯ :

ಪುಟದ ಸಂಖ್ಯೆ .....

ಕಡತದ ಸಂಖ್ಯೆ .....

ಪಂಕ್ತಿಯ ಸಂಖ್ಯೆ	ಟಪ್ಪಣಿಗಳು ಮತ್ತು ಆಜ್ಞೆಗಳು

ಮಂಡಿಸಿದೆ :-

ಕಂಡಿಕೆ (1) ರಿಂದ (4) ರವರೆಗಿನ ವರದಿಯನ್ನು ತಮ್ಮ ಅವಗಾಹನೆಗೆ ಮಂಡಿಸಿದೆ

-5- ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಕೆಡಿಪಿದಲ್ಲಿ ನಮೂದಿಸಿರುವ ಕಾಮಗಾರಿಯು ಯಲಹಂಕ ವಲಯದ ಕಾಮಗಾರಿಯಾಗಿದ್ದು ಸದರಿ ಕಾಮಗಾರಿಯ ಅರ್ಜಿಯನ್ನು ಯಲಹಂಕ ವಲಯಕ್ಕೆ ಕಳುಹಿಸಿಕೊಡಲು ಮುಂದಿನ ಆದೇಶ ಕೋರಿ ಕಡತವನ್ನು ಮಂಡಿಸಿದೆ.

ಕಾರ್ಯಪಾಲಕ ಅಭಿಯಂತರರು
ಗಾಂಧಿನಗರ ವಿಭಾಗ
ಬೃಹತ್ ಬೆಂಗಳೂರು ಮಹಾನಗರ ಪಾ...
ಬೆಂಗಳೂರು

ಮುಖ್ಯ ಅಭಿಯಂತರರು (ಯಲಹಂಕ)

ಸಂಖ್ಯೆ: 25

ದಿನಾಂಕ: 16/4/2021

ಬೆಂಗಳೂರು ಮಹಾನಗರ ಪಾಲಿಕೆ

ಮಂಡಿಸಿದೆ,

ಕಂಡಿಕೆ (1) ರಿಂದ (6)ರವರೆಗಿನ ವರದಿಯನ್ನು ತಮ್ಮ ಅವಗಾಹನೆಗೆ ಸಲ್ಲಿಸಿದೆ.

7) ಕಾರ್ಯಪಾಲಕ ಅಭಿಯಂತರರು (ಗಾಂಧಿನಗರ)ರವರು ಕೋರಿ ಸಲ್ಲಿಸಿರುವಂತೆ White Topping of road from Sheshadripuram first Grade college to Aroma bakery junction via 3rd cross road 1st A main road, 16th B cross road Annexure-F(2) ಕಾಮಗಾರಿಯು ಯಲಹಂಕ ವಿಭಾಗಕ್ಕೆ ಸಂಬಂಧಿಸಿರುವುದರಿಂದ ಕರ್ನಾಟಕ ಸರ್ಕಾರದ ನಡವಳಿ ಪತ್ರವನ್ನು ಕಡತದಲ್ಲಿ ಲಗತ್ತಿಸಿ, ಮುಂದಿನ ಅಗತ್ಯ ಕ್ರಮಕ್ಕಾಗಿ ಮುಖ್ಯ ಅಭಿಯಂತರರು (ಯಲಹಂಕ) ರವರ ಅವಗಾಹನೆಗೆ ಸಲ್ಲಿಸಲು ತಮ್ಮ ಆದೇಶ ಕೋರಿ ಮಂಡಿಸಿದೆ.

Kavitha. M
20/04

8) ತಾಂತ್ರಿಕ ಸಹಾಯಕರು 20/04/2021

ಮುಖ್ಯ ಅಭಿಯಂತರರು (ಯಲಹಂಕ)
ಬೃಹತ್ ಬೆಂಗಳೂರು ಮಹಾನಗರ ಪಾ...
ಬೆಂಗಳೂರು

10) ಮು.ಅ [ಯಲಹಂಕ]

Scanned by TapScanner

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ಪೈ 2018, ದಿನಾಂಕ: 20–09–2019ರಲ್ಲಿ ಮಾನ್ಯ "ಮುಖ್ಯಮಂತ್ರಿಗಳ ನವ ನಗರೋತ್ಥಾನ" ಯೋಜನೆಯಡಿ ಹಾಗೂ ಸರ್ಕಾರದ ಆದೇಶ ಸಂಖ್ಯೆ: ನಅಇ 263 ಎಂಎನ್‌ಪೈ 2019, ದಿನಾಂಕ: 08–01–2020ರಡಿ ನೀಡಿರುವ ಅನುಮೋದನೆಯಂತೆ ಕೈಗೊಳ್ಳಲು ಉದ್ದೇಶಿಸಿರುವ "White Topping of road from Sheshadripuram First Grade College to Aroma Bakery Junction via 3rd Cross Road 1st A Main Road, 16th B Cross Road Annexure-F(2)" ಪ್ಯಾಕೇಜಿನ ರೂ.13.93 ಕೋಟಿಗಳ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ಮತ್ತು ಟೆಂಡರ್‌ಗೆ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ಪೈ 2018, ದಿನಾಂಕ: 20–09–2019.
2. ಸರ್ಕಾರದ ಆದೇಶ ಸಂಖ್ಯೆ: ನಅಇ 263 ಎಂಎನ್‌ಪೈ 2019, ದಿನಾಂಕ: 08–01–2020.
3. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಪತ್ರ ಸಂಖ್ಯೆ: ಆಯುಕ್ತರು/ಪಿ.ಆರ್/(ಜಿ)1879/2020–21, ದಿನಾಂಕ: 11–08–2020.
4. ದಿನಾಂಕ: 16–10–2020 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿ.

* * * * *

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ: 20–09–2019ರ ಆದೇಶದಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ 2018–19ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿ ಒದಗಿಸಿರುವ ಅನುದಾನದಲ್ಲಿ ಕೈಗೊಳ್ಳಲು ಉದ್ದೇಶಿಸಿ, ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ಪೈ 2018, ದಿನಾಂಕ: 01–02–2019 ರಂತೆ ಅನುಮೋದಿಸಿದ್ದ, "ಮುಖ್ಯಮಂತ್ರಿಗಳ ನವ ಬೆಂಗಳೂರು ಯೋಜನೆ"ಯನ್ನು ರದ್ದುಪಡಿಸಿ ಪರ್ಯಾಯವಾಗಿ "ಮುಖ್ಯಮಂತ್ರಿಗಳ ನವ ನಗರೋತ್ಥಾನ" ಕ್ರಿಯಾ ಯೋಜನೆಗೆ ಕೆಲವೊಂದು ಷರತ್ತುಗಳಿಗೆ ಒಳಪಟ್ಟು ಅನುಮೋದನೆಯನ್ನು ನೀಡಲಾಗಿದ್ದು, ಸದರಿ ಆದೇಶದ ಕ್ರಮ ಸಂಖ್ಯೆ:F(2) ರಲ್ಲಿ ರೂ.50.00 ಕೋಟಿಗಳ ವೆಚ್ಚದಲ್ಲಿ ಟಾಪಿಂಗ್ ಯೋಜನೆಯ ಅಂದಾಜು ಪಟ್ಟಿಗಳನ್ನು ಪರಿಷ್ಕರಿಸಿ, ಆಯ್ದ ಕೆಲ ರಸ್ತೆಗಳ ವೈಟ್ ಟಾಪಿಂಗ್ ಕಾಮಗಾರಿ ಕೈಗೊಳ್ಳಲು ಅನುಮೋದನೆ ನೀಡಲಾಗಿದೆ.

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿನಾಂಕ: 08–01–2020ರ ಆದೇಶದಲ್ಲಿ ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ಪೈ 2018, ದಿನಾಂಕ: 20–09–2019 ರ "ಮುಖ್ಯಮಂತ್ರಿಗಳ ನವ ನಗರೋತ್ಥಾನ" ಯೋಜನೆಯಡಿ ರೂ.8015.37 ಕೋಟಿಗಳ ಅಂದಾಜು ಮೊತ್ತದ ಕ್ರಿಯಾಯೋಜನೆಯಲ್ಲಿ ಅನುಮೋದಿಸಲಾಗಿರುವ, "ವೈಟ್ ಟಾಪಿಂಗ್ ಅಂದಾಜು ಪಟ್ಟಿಗಳನ್ನು ಪರಿಷ್ಕರಿಸಿ, ಆಯ್ದ ಕೆಲ ರಸ್ತೆಗಳ ವೈಟ್ ಟಾಪಿಂಗ್ ಕಾಮಗಾರಿಗಳಿಗೆ ನಿಗಧಿಪಡಿಸಿರುವ ರೂ. 50.00 ಕೋಟಿಗಳ ಅನುದಾನದ ಪೈಕಿ, "Whitetopping of Road from Sheshadripuram First Grade College to Aroma Bakery Junction via 3rd Cross Road 1st A Main Road, 16th B Cross Road" ಕಾಮಗಾರಿಯನ್ನು ಪ್ರತಿ ಕಿ.ಮೀ.ಗೆ ರೂ.7.05ಕೋಟಿಯಂತೆ, ರೂ.13.93 ಕೋಟಿಗಳ ಅಂದಾಜು ವೆಚ್ಚದಲ್ಲಿ, ಕಾಮಗಾರಿಯನ್ನು ಕೈಗೊಳ್ಳಲು ಕೆಲವು ಷರತ್ತುಗಳಿಗೆ ಒಳಪಟ್ಟು ಕ್ರಿಯಾ ಯೋಜನೆಗೆ ಸರ್ಕಾರವು ಅನುಮೋದನೆ ನೀಡಿದೆ.

. . .2/-

ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ದಿನಾಂಕ: 11-08-2020ರ ಪತ್ರದಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರು, ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 20-09-2019ರಲ್ಲಿ 2018-19, 2019-20 ಮತ್ತು 2020-21ನೇ ಸಾಲಿನ ಮಾನ್ಯ "ಮುಖ್ಯಮಂತ್ರಿಗಳ ನವ ನಗರೋತ್ಥಾನ" ಯೋಜನೆಯಡಿಯಲ್ಲಿ ಒದಗಿಸಿರುವ ರೂ.8015.37 ಕೋಟಿಗಳ ಅನುದಾನದಲ್ಲಿ ವಿವಿಧ ಅನುಬಂಧಗಳಲ್ಲಿ ಕಾಮಗಾರಿಗಳ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಗಿದೆ ಎಂದು ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರು ತಿಳಿಸಿರುತ್ತಾರೆ.

ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 20-09-2019ರ ಕ್ರಿಯಾ ಯೋಜನೆ ರೂ.8015.37 ಕೋಟಿ ಹೊರತುಪಡಿಸಿ, ಹೆಚ್ಚುವರಿಯಾಗಿ ವೈಟ್ ಟಾಪಿಂಗ್ ಯೋಜನೆಯ ಅಂದಾಜು ಪಟ್ಟಿಗಳನ್ನು ಪರಿಷ್ಕರಿಸಿ ಆಯ್ದ ಕೆಲವು ರಸ್ತೆಗಳ ವೈಟ್ ಟಾಪಿಂಗ್ ಕಾಮಗಾರಿಗಾಗಿ ಅನುಬಂಧ-F(2) ಅಡಿಯಲ್ಲಿ ಅನುದಾನ ಮೀಸಲಿರಿಸಲಾಗಿದೆ. ಸರ್ಕಾರದ ಆದೇಶ ಸಂಖ್ಯೆ: ನಅಇ 263 ಎಂಎನ್‌ವೈ 2019, ದಿನಾಂಕ: 08-01-2020 ರಲ್ಲಿ "White Topping of road from Sheshadripuram First Grade College to Aroma Bakery Junction via 3rd Cross Road 1st A Main Road, 16th B Cross Road Annexure-F(2)" ಕಾಮಗಾರಿಗಳ ಮೊತ್ತ ರೂ.1393.00 ಲಕ್ಷಗಳಿಗೆ ಸರ್ಕಾರವು ಅನುಮೋದನೆ ನೀಡಿರುವಂತೆ ಜಾಬ್ ಸಂಖ್ಯೆಯನ್ನು ಪಡೆಯಲಾಗಿರುತ್ತದೆ.

ಸದರಿ ಕಾಮಗಾರಿಯನ್ನು ಕೈಗೊಳ್ಳಲು ಅನುಮೋದನೆ ನೀಡಿರುವಂತೆ ಯಲಹಂಕ ವಲಯ ಯೋಜನಾ ವಿಭಾಗ ಕಛೇರಿಯಿಂದ ಟೆಂಡರ್ ಪ್ರಕಟಣೆ ಸಂಖ್ಯೆ: BBMP/YNK/EE(Project)/TEND/30/ 2019-20, ದಿನಾಂಕ: 26-02-2020 ರಲ್ಲಿ ರೂ.1393.00 ಲಕ್ಷಗಳ ಅಂದಾಜು ಮೊತ್ತಕ್ಕೆ ಟೆಂಡರ್ ಆಹ್ವಾನಿಸಿದ್ದು, ಸದರಿ ಕಾಮಗಾರಿಯ ತಾಂತ್ರಿಕ ಬಿಡ್ ಅನ್ನು ದಿನಾಂಕ: 13-03-2020 ರಂದು ತೆರೆಯಲಾಗಿದ್ದು, ಟೆಂಡರ್ ಪ್ರಕ್ರಿಯೆಯಲ್ಲಿ ಮೂರು ಜನ ಗುತ್ತಿಗೆದಾರರು ಭಾಗವಹಿಸಿದ್ದು, ಅದರಲ್ಲಿ ಇಬ್ಬರು ಗುತ್ತಿಗೆದಾರರು ತಾಂತ್ರಿಕವಾಗಿ ಅರ್ಹರಾಗಿರುವುದರಿಂದ ದಿನಾಂಕ: 11-06-2020 ರಂದು ಆಯುಕ್ತರ ಅಧ್ಯಕ್ಷತೆಯಲ್ಲಿ ನಡೆದ ತಾಂತ್ರಿಕ ಮೌಲ್ಯಮಾಪನ ಸಮಿತಿ ಸಭೆಯಲ್ಲಿ ತಾಂತ್ರಿಕ ಬಿಡ್‌ಗೆ ಅನುಮೋದನೆ ನೀಡಿ ಆರ್ಥಿಕ ಬಿಡ್ ಅನ್ನು ತೆರೆಯಲು ಅನುಮೋದನೆ ನೀಡಿರುವಂತೆ ದಿನಾಂಕ: 16-06-2020 ರಂದು ತೆರೆಯಲಾಗಿದ್ದು, ವಿವರ ಈ ಕೆಳಕಂಡಂತಿದೆ ಎಂದು ಬಿಬಿಎಂಪಿ ಆಯುಕ್ತರು ತಿಳಿಸಿರುತ್ತಾರೆ.

ಕ್ರಮ ಸಂಖ್ಯೆ	ತಾಂತ್ರಿಕ ಮೌಲ್ಯಮಾಪನದಲ್ಲಿ ಅರ್ಹರಾದ ಗುತ್ತಿಗೆದಾರರು	ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ)	ಟೆಂಡರ್‌ಗಿಟ್ಟ ಮೊತ್ತ (ರೂ. ಲಕ್ಷಗಳಲ್ಲಿ)	ಟೆಂಡರ್‌ನಲ್ಲಿ ನಮೂದಿಸಿರುವ ಮೊತ್ತ (ರೂ. ಗಳಲ್ಲಿ)	ಟೆಂಡರ್‌ಗಿಟ್ಟ ಮೊತ್ತ ದರಗಳಿಗೆ ಹೋಲಿಸಿದಾಗ
1	Sri C. Premachandar Reddy (NCC Limited)	1393.00	1228.52	17,37,98,249.65	(+)41.47%
2	Sri Pichakal Venkateshwar Rao (Amrutha Constructions Pvt. Ltd.,			17,96,69,433.60	(+)46.25%

ಸದರಿ ಕಾಮಗಾರಿಯ ಟೆಂಡರ್ ಪ್ರಕ್ರಿಯೆಯಲ್ಲಿ ಭಾಗವಹಿಸಿರುವ ಎಲ್-1 ಬಿಡ್ದುದಾರರಾದ Sri C. Premachandar Reddy (NCC Limited) ರವರೊಂದಿಗೆ ದರ ಸಂಧಾನ ಮಾಡಲಾಗಿದ್ದು, ದರ ಸಂಧಾನದ ನಂತರದ ದರಗಳ ವಿವರ ಈ ಕೆಳಕಂಡಂತಿರುತ್ತದೆ ಎಂದು ಬಿಬಿಎಂಪಿ ಆಯುಕ್ತರು ತಿಳಿಸಿರುತ್ತಾರೆ.

. . .3/-

Scanned by TapScanner

ಕ್ರಮ ಸಂಖ್ಯೆ	ತಾಂತ್ರಿಕ ಮೌಲ್ಯಮಾಪನದಲ್ಲಿ ಅರ್ಹರಾದ ಗುತ್ತಿಗೆದಾರರು	ಟೆಂಡರ್‌ಗಿಟ್ಟ ಮೊತ್ತ (ರೂ. ಲಕ್ಷಗಳಲ್ಲಿ) 2018-19ನೇಸಾಲಿನ ದರಪಟ್ಟಿಯಂತೆ (ಮಂಜೂರಾತಿ ದರ)	2018-19ನೇ ಸಾಲಿನ ದರಪಟ್ಟಿಯಂತೆ ಟೆಂಡರ್‌ಗಿಟ್ಟ ಮೊತ್ತ (ರೂ. ಲಕ್ಷಗಳಲ್ಲಿ)	ಟೆಂಡರ್‌ನಲ್ಲಿ ನಮೂದಿಸಿರುವ ಮೊತ್ತ (ರೂ. ಗಳಲ್ಲಿ)	ಟೆಂಡರ್‌ಗಿಟ್ಟ ಮೊತ್ತ ದರಗಳಿಗೆ ಹೋಲಿಸಿದಾಗ ಶೇ.ವಾರು	ದರ ಸಂಧಾನದ ನಂತರಗುತ್ತಿಗೆದಾರರು ಒಪ್ಪಿರುವ ಮೊತ್ತ
1	Sri C. Premachandar Reddy (NCC Limited)	1228.52	1737.98	(+)41.47%	1474.88	16.70% ಎಲ್-1

ಎಲ್-1 ಬಿಡ್‌ದಾರರಾದ Sri C. Premachandar Reddy (NCC Limited) ರವರು ಮಂಜೂರಾತಿ ದರಗಳ ಮೇಲೆ ಶೇ.16.70% ರಷ್ಟು ಹೆಚ್ಚುವರಿಯಾಗಿದ್ದು, ಮುಖ್ಯ ಅಭಿಯಂತರರು ಯಲಹಂಕ ವಲಯ ರವರು ಗುತ್ತಿಗೆದಾರರೊಂದಿಗೆ ದರ ಸಂಧಾನ ನಡೆಸಿ ದರ ಸಂಧಾನದ ನಂತರ ರೂ.1474.88 ಲಕ್ಷಗಳಾಗಿದ್ದು, ಮಂಜೂರಾತಿ ದರಗಳ ಮೇಲೆ (2018-19ನೇ ಸಾಲಿನ) ಶೇ.16.70% ರಷ್ಟು ಹೆಚ್ಚುವರಿಯಾಗಿರುತ್ತದೆ. ದಿನಾಂಕ: 11-08-2020 ರಂದು ನಡೆದ ಆರ್ಥಿಕ ಮೌಲ್ಯಮಾಪನ ಸಮಿತಿ ಸಭೆಯಲ್ಲಿ ಚರ್ಚಿಸಿ, ಈಗಾಗಲೇ ವೈಟ್ ಟಾಪಿಂಗ್ ಕಾಮಗಾರಿಗಾಗಿ ಸರ್ಕಾರದ ಆದೇಶ ಸಂಖ್ಯೆ: ನಅಇ 24 ಎಂಎನ್‌ವೈ 2019, ದಿನಾಂಕ: 15-07-2019 ರಲ್ಲಿ 2018-19ನೇ ಸಾಲಿನ ದರಗಳ ಪಟ್ಟಿಯ ಮೇಲೆ ಟೆಂಡರ್‌ಗಿಟ್ಟ ಮೊತ್ತಕ್ಕೆ ಶೇ.19% ರಷ್ಟು ಅಧಿಕ ಟೆಂಡರ್ ಪ್ರೀಮಿಯಂ ನೀಡಲು ಅನುಮೋದನೆ ನೀಡಿರುವಂತೆ, ಸದರಿ ಕೆಲಸವು ಸಹ ವೈಟ್ ಟಾಪಿಂಗ್ ಕೆಲಸವಾಗಿರುವುದರಿಂದ ಗುತ್ತಿಗೆದಾರರೊಂದಿಗೆ ದರ ಸಂಧಾನ ನಡೆಸಿರುವಂತೆ ರೂ.1474.88 ಲಕ್ಷಗಳಲ್ಲಿ ಶೇ.16.70% ಅಧಿಕ ಟೆಂಡರ್ ಪ್ರೀಮಿಯಂ ನೀಡುವ ಬಗ್ಗೆ ತೀರ್ಮಾನ ಕೈಗೊಳ್ಳಲು ಸರ್ಕಾರದ ಮಟ್ಟದಲ್ಲಿ ರಚಿತವಾಗಿರುವ ಅಧಿಕಾರಯುಕ್ತ ಸಮಿತಿಯ ಮುಂದೆ ಮಂಡಿಸುವುದು ಸೂಕ್ತವೆಂದು ಸರ್ವಾನುಮತದಿಂದ ತೀರ್ಮಾನಿಸಲಾಗಿರುತ್ತದೆ ಎಂದು ಆಯುಕ್ತರು ತಿಳಿಸಿರುತ್ತಾರೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಕಾಮಗಾರಿಯ ಅಂದಾಜು ಮೊತ್ತ ರೂ.1393.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ಮತ್ತು ಕಡಿಮೆ ಮೊತ್ತದ ಟೆಂಡರ್‌ದಾರರಾದ Sri C. Premachandar Reddy (NCC Limited) ರವರ ಸಂಧಾನಿತ ಟೆಂಡರ್ ಮೊತ್ತ ರೂ.1474.88 ಲಕ್ಷಗಳು ಶೇ.16.70% ರಷ್ಟು ಅಧಿಕ ದರಗಳಿಗೆ ಟೆಂಡರ್ ಮಂಜೂರಾತಿಯನ್ನು ನೀಡುವಂತೆ ಬಿಬಿಎಂಪಿ ಆಯುಕ್ತರು ಕೋರಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ (4) ರಲ್ಲಿ ಓದಲಾದ ದಿನಾಂಕ: 16-10-2020 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ಮುಂದೆ ಬಿ.ಬಿ.ಎಂ.ಪಿ. ಆಯುಕ್ತರ ದಿನಾಂಕ: 11-08-2020ರ ಪ್ರಸ್ತಾವನೆಯನ್ನು ಮಂಡಿಸಲಾಗಿದ್ದು, ಅಧಿಕಾರಯುಕ್ತ ಸಮಿತಿ ಸಭೆಯಲ್ಲಿ ವಿಷಯವನ್ನು ಚರ್ಚಿಸಿ ಈ ಕೆಳಕಂಡಂತೆ ನಿರ್ಣಯಿಸಲಾಗಿದೆ.

"ವಿವರವಾದ ಚರ್ಚೆಯ ನಂತರ "White Topping of road from Sheshadripuram First grade College to Aroma Bakery junction via 3rd Cross Road 1st A Main Road, 16th B Cross Road Annexure- F(2)" ಪ್ಯಾಕೇಜಿನ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ, C Premachandar Reddy (NCC Limited) ರವರ

. . .4/-

Scanned by TapScanner

ಸಂಧಾನಿತ ಬಿಡ್ಡನ್ನು ಟೆಂಡರ್‌ಗಿಟ್ಟ ಮೊತ್ತವಾದ ರೂ.12,28,51,219.88 ಗಳಿಗೆ ಹೋಲಿಸಿದಾಗ 1.00% ಅಧಿಕ ಅಂದರೆ ರೂ.12,40,79,732/- ಗಳಿಗೆ ಮಿತಿಗೊಳಿಸಿ ಅನುಮೋದಿಸಲು ಸರ್ವಾನುಮತದಿಂದ ತೀರ್ಮಾನಿಸಲಾಯಿತು."

ದಿನಾಂಕ: 16-10-2020 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಿರ್ಣಯದಂತೆ ಈ ಆದೇಶ.

ಸರ್ಕಾರಿ ಆದೇಶ ಸಂಖ್ಯೆ: ನಅಇ 215 ಎಂಎನ್‌ವೈ 2020,
ಬೆಂಗಳೂರು, ದಿನಾಂಕ: 09-11-2020.

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಸರ್ಕಾರದ ಆದೇಶ ಸಂಖ್ಯೆ: ನಅಇ 263 ಎಂಎನ್‌ವೈ 2019, ದಿನಾಂಕ: 08-01-2020 ರಲ್ಲಿ ಅನುಮೋದನೆ ನೀಡಿರುವ "White Topping of road from Sheshadripuram First grade College to Aroma Bakery junction via 3rd Cross Road 1st A Main Road, 16th B Cross Road Annexure- F(2)" ಪ್ಯಾಕೇಜಿನ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ, ದಿನಾಂಕ: 16-10-2020 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಿರ್ಣಯದಂತೆ C Premachandar Reddy (NCC Limited) ರವರ ಬಿಡ್ಡನ್ನು ಟೆಂಡರ್‌ಗಿಟ್ಟ ಮೊತ್ತವಾದ ರೂ.12,28,51,219.88 ಗಳಿಗೆ ಹೋಲಿಸಿದಾಗ 1.00% ಅಧಿಕ ಅಂದರೆ ರೂ.12,40,79,732/- (ಹನ್ನೆರಡು ಕೋಟಿ ನಲವತ್ತು ಲಕ್ಷದ ಎಪ್ಪತ್ತೊಂಭತ್ತು ಸಾವಿರದ ಏಳುನೂರ ಮೂವತ್ತೆರಡು ರೂಪಾಯಿಗಳು ಮಾತ್ರ) ಗಳಿಗೆ ಮಿತಿಗೊಳಿಸಿ, ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಟೆಂಡರ್‌ಗೆ ಅನುಮೋದನೆಯನ್ನು ನೀಡಿದೆ.

ಷರತ್ತುಗಳು:

1. ಕಾಮಗಾರಿಗಳಿಗೆ ಅನುಮೋದನೆ ನೀಡಿರುವ ಟೆಂಡರ್ ಮೊತ್ತಕ್ಕೆ ಬಿಡ್‌ದಾರರು ಒಪ್ಪದ ಪಕ್ಷದಲ್ಲಿ ಮರು ಟೆಂಡರ್ ಕರೆಯುವುದು.
2. ಮೇಲಿನ ಕಾಮಗಾರಿಗಳನ್ನು ಕೆ.ಟಿ.ಪಿ.ಪಿ. ಕಾಯ್ದೆ / ನಿಯಮಗಳು ಹಾಗೂ ಎಲ್ಲಾ ಚಾಲ್ತಿ ನಿಯಮಗಳನ್ನು ಪಾಲಿಸಿಕೊಂಡು ಅನುಷ್ಠಾನಗೊಳಿಸುವುದು.
3. ಈ ಕಾಮಗಾರಿಗೆ ತಗಲುವ ವೆಚ್ಚವನ್ನು ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 20-09-2019ರ "ಮುಖ್ಯಮಂತ್ರಿಗಳ ನವ ನಗರೋತ್ಥಾನ" ಯೋಜನೆಯ ಅನುದಾನದಲ್ಲಿ ಮೀಸಲಿಟ್ಟಿರುವ ಅನುದಾನದಲ್ಲಿ ಭರಿಸುವುದು.
4. ಮೇಲಿನ ಕಾಮಗಾರಿಯನ್ನು ಸರ್ಕಾರದಿಂದ ಮಂಜೂರಾದ ಮೊತ್ತದ ಮಿತಿಯಲ್ಲಿಯೇ ಯಾವುದೇ ಹೆಚ್ಚುವರಿಯಾಗದಂತೆ ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು ಹಾಗೂ ಹೆಚ್ಚುವರಿ ಟೆಂಡರ್ ಪ್ರೀಮಿಯಂ ಅನ್ನು ಬಿಬಿಎಂಪಿಯ ಸ್ವಂತ ಸಂಪನ್ಮೂಲದಿಂದ ಭರಿಸತಕ್ಕದ್ದು.
5. ಕರ್ನಾಟಕ ಆರ್ಥಿಕ ಸಂಹಿತೆ 1958 ಸಾಧಿಲ್ವಾರು ವೆಚ್ಚ ಕೈಪಿಡಿ ಅಧಿನಿಯಮ ಹಾಗೂ ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ಎಲ್ಲಾ ಕಾಯ್ದೆ ನಿಯಮಗಳುಸಾರ ಕ್ರಮವಹಿಸತಕ್ಕದ್ದು.
6. ಸರ್ಕಾರವು ಕಾಮಗಾರಿಗಳಿಗೆ ಆಡಳಿತಾತ್ಮಕ ಮತ್ತು ಟೆಂಡರ್‌ಗಳಿಗೆ ಅನುಮೋದನೆ ನೀಡಿದ್ದಾಗ್ಯೂ ಸಹ ಕಾಮಗಾರಿಯು ಪುನರಾವರ್ತನೆ ಆಗದಂತೆ ನೋಡಿಕೊಳ್ಳತಕ್ಕದ್ದು. ಅನುಮೋದನೆ ಗೊಂಡಿರುವ ಕಾಮಗಾರಿಯನ್ನಲ್ಲದೆ ಯಾವುದೇ ಕಾರಣಕ್ಕೆ ಬೇರೆ ಕಾಮಗಾರಿಗಳನ್ನು ಕೈಗೊಳ್ಳಬಾರದು.

. . .5/-

Scanned by TapScanner

7. ಮೇಲಿನ ಕಾಮಗಾರಿಗೆ 3rd Party Quality Monitors ಗಳನ್ನು ನೇಮಿಸಿಕೊಂಡು ಉತ್ತಮ ಗುಣಮಟ್ಟದಿಂದ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು.
8. ದಿನಾಂಕ: 16-10-2020ರ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿಯಲ್ಲಿ ನಮೂದಿಸಿರುವ ಎಲ್ಲಾ ಷರತ್ತು ಹಾಗೂ ನಿಬಂಧನೆಗಳನ್ನು ತಪ್ಪದೆ ಪಾಲಿಸತಕ್ಕದ್ದು.
9. ಸದರಿ ಬಿಡ್ದುದಾರರು ಅಥವಾ ಇನ್ಯಾವುದೇ ಹಂತದಲ್ಲಿ ತಪ್ಪು ಮಾಹಿತಿ / ದಾಖಲೆ ನೀಡಿರುವುದು ಕಂಡುಬಂದಲ್ಲಿ ಟೆಂಡರ್‌ಅನ್ನು ರದ್ದುಪಡಿಸಲು ಬಿಬಿಎಂಪಿ ಆಯುಕ್ತರು ನಿಯಮಾನುಸಾರ ಕ್ರಮ ವಹಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಲಕ್ಷ್ಮಿ ಸಾಗರ್ ಎನ್.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

ಇವರಿಗೆ:

1. ಮಹಾಲೇಖಪಾಲರು, ಲೆಕ್ಕ ತಪಾಸಣೆ/ಲೆಕ್ಕಪತ್ರ, ಕರ್ನಾಟಕ ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
5. ವಿಶೇಷ ಆಯುಕ್ತರು (ಯೋಜನೆ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
6. ಪ್ರಧಾನ ಅಭಿಯಂತರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 3 ಮತ್ತು 9), ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
10. ಸರ್ಕಾರದ ಜಂಟಿ ಕಾರ್ಯದರ್ಶಿ ರವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
11. ಕಾರ್ಯಪಾಲಕ ಅಭಿಯಂತರರು (ತಾಂತ್ರಿಕ ಕೋಶ), ನಗರಾಭಿವೃದ್ಧಿ ಇಲಾಖೆ.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

Scanned by TapScanner